# ಟಿ.ಪಿ.ಕೈಲಾಸಂ

ಟಿ.ಪಿ.ಕೈಲಾಸಂರವರು ಕನ್ನಡ ರಂಗಭೂಮಿಯ ಪ್ರಮುಖ ವ್ಯಕ್ತಿ. ಅವರು ೨೯.೦೭.೧೮೮೪ ರಂದು ಮೈಸೂರಿನಲ್ಲಿ ಜನಿಸಿದರು. ಅವರ ಪೂರ್ಣ ಹೆಸರು ತ್ಯಾಗರಾಜ ಪರಮಶಿವ ಕೈಲಾಸಂ. ಅವರು ತಮಿಳು ಅಯ್ಯರ್ ಕುಟುಂಬದಲ್ಲಿ ಜನಿಸಿದರು. ಅವರ ತಂದೆ ಪರಮಶಿವ ಅಯ್ಯರ್, ಮೈಸೂರು ಹೈಕೋರ್ಟ್‌ನ ನ್ಯಾಯಮೂರ್ತಿಯಾಗಿದ್ದರು. ಅವರ ತಾಯಿ ಕಮಲಮ್ಮ. ಅವರು ಭೂವಿಜ್ಞಾನಿಯಾಗಿ ವೃತ್ತಿಜೀವನವನ್ನು ಪ್ರಾರಂಭಿಸಿದರೂ, ನಾಟಕ ರಚನೆಯಲ್ಲಿ ತಮ್ಮ ಆಸಕ್ತಿಯನ್ನು ಕಂಡುಕೊಂಡರು ಮತ್ತು ಕನ್ನಡ ಸಾಹಿತ್ಯಕ್ಕೆ ಮಹತ್ವದ ಕೊಡುಗೆ ನೀಡಿದರು. ಅವರ ನಾಟಕಗಳು ಸಮಾಜದ ಮೂಢನಂಬಿಕೆಗಳು ಮತ್ತು ದೋಷಗಳನ್ನು ವ್ಯಂಗ್ಯವಾಗಿ ವಿಡಂಬನೆ ಮಾಡುತ್ತವೆ.

**ಬಾಲ್ಯ ಮತ್ತು ಶಿಕ್ಷಣ:**

- ಬೆಂಗಳೂರಿನಲ್ಲಿ ಹುಟ್ಟಿದ ಕೈಲಾಸಂ ಅವರ ಬಾಲ್ಯ ಜೀವನ ಅತ್ಯಂತ ಶಿಸ್ತಿನಿಂದ ಕಳೆಯಿತು.
- ವಿದ್ಯಾಭ್ಯಾಸ ನಡೆದುದು ಬೆಂಗಳೂರು, ಮೈಸೂರು, ಹಾಸನಗಳಲ್ಲಿ.
- ಮೆಟ್ರಿಕ್ಯುಲೇಷನ್ ಪಾಸು ಮಾಡಿದ್ದು ಮದರಾಸಿನ ಹಿಂದು ಹೈಸ್ಕೂಲಿನಲ್ಲಿ.
- ಪ್ರೆಸಿಡೆನ್ಸಿ ಕಾಲೇಜಿನಲ್ಲಿ ಭೂವಿಜ್ಞಾನ ಓದಿ ಬಿ.ಎ. ಪದವಿ. ಎಂ.ಎ.ಪದವಿಗಳನ್ನು ಪಡೆದರು.
- ಸರಕಾರದ ವಿದ್ಯಾರ್ಥಿವೇತನದೊಂದಿಗೆ ಲಂಡನ್‌ನ ರಾಯಲ್ ಕಾಲೇಜ್ ಆಫ್ ಸೈನ್ಸ್‌ನಲ್ಲಿ ಭೂವಿಜ್ಞಾನವನ್ನು ಅಧ್ಯಯನ ಮಾಡಿದರು ಮತ್ತು ಫೆಲೋಶಿಪ್ ಪಡೆದರು.

**ವೃತ್ತಿಜೀವನ:**

- ಇಂಗ್ಲೆಂಡಿನಲ್ಲಿ ವ್ಯಾಸಂಗ ಮಾಡುತ್ತಿದ್ದಾಗ ಜಾರ್ಜ್ ಬರ್ನಾಡ್ ಶಾ ಅವರ ನಾಟಕಗಳು ಕೈಲಾಸಂರವರ ಮೇಲೆ ಅಪಾರ ಪ್ರಭಾವ ಬೀರಿದ್ದವು.
- ಭಾರತಕ್ಕೆ ಹಿಂದಿರುಗಿದ ನಂತರ, ಅವರು ಮೈಸೂರು ಸರ್ಕಾರದಲ್ಲಿ ಭೂವಿಜ್ಞಾನಿಯಾಗಿ ಸೇವೆ ಸಲ್ಲಿಸಿದರು.
- ಸರ್ಕಾರಿ ಕೆಲಸದಲ್ಲಿ ಆಸಕ್ತಿ ಇಲ್ಲದ ಕಾರಣ, ಅವರು ನಾಟಕ ಬರೆಯುವುದರಲ್ಲಿ ಹೆಚ್ಚು ಆಸಕ್ತಿ ತೋರಿಸಿದರು.
- ಕೆಲಸಕ್ಕೆ ರಾಜೀನಾಮೆ ನೀಡಿದ ಅವರು ನಾಟಕ ರಚನೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡರು.

**ಸಾಹಿತ್ಯಿಕ ಕೊಡುಗೆ:**

- ಜಾರ್ಜ್ ಬರ್ನಾಡ್ ಶಾ ರವರ ತಂತ್ರಗಾರಿಕೆ ಬಳಸಿ ಹಲವು ನಾಟಕಗಳನ್ನು ರಚಿಸಿದರು.
- ರವೀಂದ್ರನಾಥರು ಬೆಂಗಳೂರಿಗೆ ಬಂದಾಗ ಪ್ರದರ್ಶಿಸಿದ ನಾಟಕ **"ಟೊಳ್ಳುಗಟ್ಟಿ"** ಪ್ರಥಮ ಬಹುಮಾನ ಗಳಿಸಿ, ಕನ್ನಡ ರಂಗಭೂಮಿಯಲ್ಲಿ ಕ್ರಾಂತಿ ಎಬ್ಬಿಸಿತು.
- ಕೈಲಾಸಂ ನಾಟಕಗಳು ಸಮಾಜದ ದೋಷಗಳನ್ನು ತೀಕ್ಷ್ಣವಾಗಿ ಟೀಕಿಸುತ್ತವೆ.
- ಅವರ ಕೆಲವು ಪ್ರಮುಖ ನಾಟಕಗಳೆಂದರೆ "ಹೋಮ್ ರೂಲ್", "ಪೋಲೀಸಣ್ಣ", "ಬಲಿ", "ತಲೆದಂಡ", "ಸಂಪತ್ತಿಗೆ ಸವಾಲ್"

FOR KANNADA
ಕನ್ನಡಕ್ಕಾಗಿ ಇಲ್ಲಿ ಬನ್ನಿ

- ಅವರ ನಾಟಕಗಳಲ್ಲಿ ಹಾಸ್ಯ ಮತ್ತು ವ್ಯಂಗ್ಯದ ಮೂಲಕ ಸಾಮಾಜಿಕ ಸಮಸ್ಯೆಗಳನ್ನು ವಿಶ್ಲೇಷಿಸಲಾಗಿದೆ.

**ವೈಯಕ್ತಿಕ ಜೀವನ:**

- ಕೈಲಾಸಂ ಅವರು ಸರಳ ಜೀವನಶೈಲಿಯನ್ನು ಹೊಂದಿದ್ದರು.
- ಅವರ ನಾಟಕಗಳಲ್ಲಿ, ಅವರು ಕನ್ನಡ ಭಾಷೆಯನ್ನು ಹೊಸ ರೀತಿಯಲ್ಲಿ ಬಳಸಿದರು.
- ಆಡುಮಾತಿನ ಭಾಷೆಯನ್ನು ಅಳವಡಿಸಿಕೊಂಡರು.
- ಕನ್ನಡ ಸಾಹಿತ್ಯಕ್ಕೆ ಹೊಸ ಭಾಷಾ ಶೈಲಿಯನ್ನು ಪರಿಚಯಿಸಿತು.

**ನಿಧನ:**

- ಕೈಲಾಸಂರವರು 1946 ರಲ್ಲಿ ನಿಧನರಾದರು.
- ಕನ್ನಡ ಸಾಹಿತ್ಯ ಮತ್ತು ರಂಗಭೂಮಿಗೆ ಅವರ ಕೊಡುಗೆ ಅಪಾರ. ಅವರ ನಾಟಕಗಳು ಇಂದಿಗೂ ಎಲ್ಲರನ್ನು ರಂಜಿಸುತ್ತಿವೆ.

**ಕನ್ನಡಕ್ಕೊಬ್ಬ ಕೈಲಾಸಂ ( ಮನೆ ಮನೆ ಮಾತು)**

FOR KANNADA
ಕನ್ನಡಕ್ಕಾಗಿ ಇಲ್ಲಿ ಬನ್ನಿ

- ಕೈಲಾಸಂ ಅವರು ೧೯೪೫ರಲ್ಲಿ ಮದರಾಸಿನಲ್ಲಿ ನಡೆದ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದರು. ಅವರು ಮಾಡಿದ ಭಾಷಣ ಇಡೀ ಸಾಹಿತ್ಯ ಸಮ್ಮೇಳನಾಧ್ಯಕ್ಷರ ಭಾಷಣಗಳಲ್ಲೆಲ್ಲಾ ಅತ್ಯಂತ ಚಿಕ್ಕ ಹಾಗೂ ಚೊಕ್ಕದು ಎಂದು ಪ್ರಸಿದ್ಧವಾಗಿದೆ. ಏಕೆಂದರೆ ಅದರಲ್ಲಿ ಪದೇ ಪದೇ ಹೇಳಿದ್ದನ್ನೇ ಹೇಳುವ ಪರಿಪಾಠವಿರಲಿಲ್ಲ.
- ಮೊದಲ ತಯಾರಿಯಿಲ್ಲದೆ ಯಾವ ಸಮಾರಂಭಕ್ಕೂ ಅವರು ಹೋಗುತ್ತಿರಲಿಲ್ಲ. ಸಭಿಕರಿಗೆ ಮತ್ತು ಆ ದಿನದ ಸನ್ನಿವೇಶಕ್ಕೆ ಬೇಕಾದ್ದನ್ನು ಮಾತ್ರ ಹೇಳಿದ್ದರಿಂದ ಇದು ಎಲ್ಲರಿಗೂ ಅತ್ಯಂತ ಪ್ರಿಯವಾಯಿತು.
- ಕನ್ನಡಕ್ಕೊಬ್ಬ ಕೈಲಾಸಂ', ಎಂದು ಎಲ್ಲರಲ್ಲೂ ಭೇಷ್ ಎನ್ನಿಸಿಕೊಂಡವರು ಕೈಲಾಸಂ. ಕನ್ನಡ ಸಾರಸ್ವತ ಲೋಕಕ್ಕೆ ಕೊಟ್ಟ ಕೊಡುಗೆ ಅನನ್ಯ. ಪಾಶ್ಚಾತ್ಯ ಸಂಗೀತಾಸಕ್ತರಾಗಿ ಅವರು ಇಂಗ್ಲಿಷ್ ರಾಗಕ್ಕೆ ಕನ್ನಡದಲ್ಲಿ ಹಾಡು ಬರೆದು ಅಚ್ಚರಿ ಹುಟ್ಟಿಸುತ್ತಿದ್ದರು ಎಂದು ಹೇಳುತ್ತಾರೆ.